**ಕರ್ನಾಟಕ ಸರ್ಕಾರ**
**ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ**
**ರಾಷ್ಟ್ರೀಯ ಸೇವಾ ಯೋಜನೆ**

ಸಂಖ್ಯೆ: ಡಿಟಿಇ/ಎನ್‌ಎಸ್‌ಎಸ್/01/ಐಡಿಪಿ/2022-23

ಆಯುಕ್ತರ ಕಛೇರಿ,
ಅರಮನೆ ರಸ್ತೆ ಬೆಂಗಳೂರು-01
ದಿನಾಂಕ: 29.10.2022

**ಸುತ್ತೋಲೆ**

ವಿಷಯ: ಅಮೃತ ಸಮೂದಾಯ ಅಭಿವೃದ್ಧಿ ಯೋಜನೆಯಡಿ ಅರಿವು ಮೂಡಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ಸಂಪನ್ಮೂಲ ವ್ಯಕ್ತಿಗಳ ಸಹಕಾರವನ್ನು ಪಡೆಯುವ ಬಗ್ಗೆ.

ಉಲ್ಲೇಖ: ರಾಜ್ಯ ಸರ್ಕಾರದ ಪತ್ರ ಸಂಖ್ಯೆ: ಯುಸೇಇ/ರಾಸೇಯೋ/19/2021/2022-23/407 ದಿನಾಂಕ: 20.10.2022

*****

ಮೇಲ್ಕಂಡ ವಿಷಯ ಹಾಗೂ ಉಲ್ಲೇಖಕ್ಕೆ ಸಂಬಂಧಿಸಿದಂತೆ ಕರ್ನಾಟಕ ಸರ್ಕಾರದ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ರಾಷ್ಟ್ರೀಯ ಸೇವಾ ಯೋಜನಾ ಕೋಶವು, ಅಮೃತ ಸಮೂದಾಯ ಅಭಿವೃದ್ಧಿ ಯೋಜನೆಯಡಿಯರುವ ರಾಜ್ಯಾದ್ಯಂತ 750 ಗ್ರಾಮಗಳನ್ನು 450 ಕ್ಕಿಂತ ಹೆಚ್ಚು ಶೈಕ್ಷಣಿಕ ಸಂಸ್ಥೆಗಳ ಮುಖೇನ ಜನಸಾಮಾನ್ಯರಿಗೆ ಉಪಯುಕ್ತವಾಗುವ ಕಾರ್ಯಕ್ರಮಗಳಲ್ಲಿ ಹಮ್ಮಿಕೊಳ್ಳಲು ಸೂಚಿಸಿದೆ. ಬೆಂಗಳೂರಿನ ಗಾರ್ಡನ್ ಸಿಟಿ ವಿಶ್ವವಿದ್ಯಾಲಯವು ದತ್ತು ಪಡೆದು ಗ್ರಾಮಗಳ ಅಭಿವೃದ್ಧಿಗಾಗಿ, ಹಲವು ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ಹಮ್ಮಿಕೊಂಡಿದ್ದು (ವಿವರ ಲಗತ್ತಿಸಿದೆ), ಸದರಿ ವಿಶ್ವವಿದ್ಯಾಲಯದ ಸಂಪನ್ಮೂಲ ವ್ಯಕ್ತಿಗಳಾದ ಪ್ರೊ. ಸಚಿನ್ ಎಸ್. ಮೊ. ನಂ.924375006 ಇವರ ಸಹಕಾರವನ್ನು ಇಲಾಖೆಯ ವ್ಯಾಪ್ತಿಗೊಳಪಡುವ ರಾಜ್ಯದ ಸರ್ಕಾರಿ, ಅನುದಾನಿತ ಮತ್ತು ಖಾಸಗಿ ಪಾಲಿಟೆಕ್ನಿಕ್ ಸಂಸ್ಥೆಗಳ ಪ್ರಾಂಶುಪಾಲರು ಪಡೆಯಬಹುದಾಗಿದೆ.

ನಿರ್ದೇಶಕರು

ಇವರಿಗೆ :-
ಇಲಾಖೆಯ ವ್ಯಾಪ್ತಿಗೊಳಪಡುವ ರಾಜ್ಯದ ಎಲ್ಲಾ ಸರ್ಕಾರಿ, ಅನುದಾನಿತ ಮತ್ತು ಖಾಸಗಿ ಪಾಲಿಟೆಕ್ನಿಕ್ ಸಂಸ್ಥೆಗಳ ಪ್ರಾಂಶುಪಾಲರುಗಳ ಮಾಹಿತಿ ಹಾಗೂ ಸೂಕ್ತ ಕ್ರಮಕ್ಕಾಗಿ,

ಪ್ರತಿ:-
1. ರಾಜ್ಯ ಎನ್.ಎಸ್.ಎಸ್. ಅಧಿಕಾರಿಗಳು ರಾಷ್ಟ್ರೀಯ ಸೇವಾ ಯೋಜನಾ ಕೋಶ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ-ಇವರ ಮಾಹಿತಿಗಾಗಿ
2. ಇ ಆಡಳಿತ-ಅಂತರ್ ಜಾಲ ತಾಣದಲ್ಲಿ ಪ್ರಕಟಿಸಲು
3. ಕಛೇರಿ ಕಡತಕ್ಕೆ

ಕರ್ನಾಟಕ ಸರ್ಕಾರ
ರಾಷ್ಟ್ರೀಯ ಸೇವಾ ಯೋಜನಾ ಕೋಶ,
ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ

Azadi Ka Amrit Mahotsav

ಸಂಖ್ಯೆ: ಯುಸೇಇ/ರಾಸೇಯೋ/19/2021/2022-23/407

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:20.10.2022.

ಇವರಿಗೆ,

ಕಾರ್ಯಕ್ರಮ ಸಂಯೋಜನಾಧಿಕಾರಿಗಳು
ರಾಷ್ಟ್ರೀಯ ಸೇವಾ ಯೋಜನೆ.
ಎಲ್ಲಾ ವಿಶ್ವವಿದ್ಯಾಲಯ/ನಿರ್ದೇಶನಾಲಯಗಳು,

ಮಾನ್ಯರೇ,

ವಿಷಯ: ರಾಷ್ಟ್ರೀಯ ಸೇವಾ ಯೋಜನೆ ಕಾರ್ಯಕ್ರಮಗಳನ್ನು ಮತ್ತು ಅರಿವು ಮೂಡಿಸುವ ಶಿಬಿರಗಳನ್ನು ಹಮ್ಮಿಕೊಳ್ಳಲು ಸಂಪನ್ಮೂಲ ವ್ಯಕ್ತಿಗಳ ಸಹಕಾರವನ್ನು ಪಡೆಯುವ ಬಗ್ಗೆ.

***

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ, ರಾಷ್ಟ್ರೀಯ ಸೇವಾ ಯೋಜನಾ ಕೋಶವು, ಅಮೃತ ಸಮುದಾಯ ಅಭಿವೃದ್ಧಿ ಯೋಜನೆಯಡಿರುವ 750 ಗ್ರಾಮಗಳನ್ನು 450ಕ್ಕಿಂತ ಹೆಚ್ಚು ಶೈಕ್ಷಣಿಕ ಸಂಸ್ಥೆಗಳ ಮೂಲಕ ದತ್ತು ಪಡೆದು, ಗ್ರಾಮಗಳ ಅಭಿವೃದ್ಧಿಗಾಗಿ, ಎಲ್ಲಾ ಇಲಾಖೆಗಳ ಸಹಕಾರದೊಂದಿಗೆ ಶ್ರಮಿಸುತ್ತಿದೆ. ಈ ಹಿನ್ನೆಲೆಯಲ್ಲಿ ಗಾರ್ಡನ್‌ಸಿಟಿ ವಿಶ್ವವಿದ್ಯಾಲಯ, ಬೆಂಗಳೂರು ರವರು ತಮ್ಮ ವಿಶ್ವವಿದ್ಯಾಲಯದ ಅಡಿಯಲ್ಲಿ ಕೆಳಕಂಡ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದು, ಸದರಿ ಕಾರ್ಯಕ್ರಮಗಳು ಜನಸಾಮಾನ್ಯರಿಗೆ ಉಪಯುಕ್ತವಾಗಿದ್ದು, ಸದರಿ ವಿಶ್ವವಿದ್ಯಾಲಯದ ಕಾರ್ಯಕ್ರಮಗಳ ಆಯೋಜಕರ ಸಹಕಾರವನ್ನು, ಬೇರೆ ವಿಶ್ವವಿದ್ಯಾಲಯಗಳಿಗೂ ಸಹ ವಿಸ್ತರಿಸಿ, ಸರ್ಕಾರದ ಮೇಲಿನ ಯೋಜನೆಯ ಅರ್ಥಪೂರ್ಣ ಯಶಸ್ವಿಗಾಗಿ, ಮಾನ್ಯ ಅಪರ ಮುಖ್ಯ ಕಾರ್ಯದರ್ಶಿಗಳು, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಇವರು ಸೂಚಿಸಿದ್ದಾರೆ.

ಮುಂದುವರೆದು, ಅಮೃತ ಸಮುದಾಯ ಅಭಿವೃದ್ಧಿ ಯೋಜನೆಯಡಿ ತಮ್ಮ ವಿಶ್ವವಿದ್ಯಾಲಯದ ವ್ಯಾಪ್ತಿಯಲ್ಲಿ ದತ್ತು ಪಡೆದ ಗ್ರಾಮಗಳಲ್ಲಿ, ಶೈಕ್ಷಣಿಕ ಸಂಸ್ಥೆಗಳ ಮೂಲಕ ಜನತೆಗೆ, ಕಾರ್ಯಕ್ರಮಗಳನ್ನು ಗಾರ್ಡನ್ ಸಿಟಿ ವಿಶ್ವವಿದ್ಯಾಲಯ, ಬೆಂಗಳೂರುರವರ ಸಹಕಾರದೊಂದಿಗೆ ಹಮ್ಮಿಕೊಳ್ಳುಲು ಕೋರಲಾಗಿದೆ.

1. Self-reliance camp for Rural Women. for e.g. hand embroidery for ladies
2. Physio camp, community survey.
3. Health and Hygiene Cooking Workshop for Rural Women.
4. Vermi-compost Workshop
5. Workshop on Painting and Artwork.
6. Workshop on Apiculture.
7. Home Gardening Awareness Camp and Distribution of various Medicinal Plants.
8. Workshop on innovative Beverages-Cucumber Cooler.

ಗಾರ್ಡನ್‌ಸಿಟಿ ವಿಶ್ವವಿದ್ಯಾಲಯ, ಬೆಂಗಳೂರು ರವರ ಸಂಪನ್ಮೂಲ ವ್ಯಕ್ತಿಗಳ ಸಹಕಾರವನ್ನು ಪಡೆಯಲು, ಪ್ರೊ.ಸಚಿನ್ ಎಸ್, ಮೊ.ನಂ.9243750060 ಕಾರ್ಯಕ್ರಮ ಸಂಯೋಜನಾಧಿಕಾರಿಗಳನ್ನು ಸಂಪರ್ಕಿಸುವುದು.

ವಂದನೆಗಳೊಂದಿಗೆ.

ತಮ್ಮ ವಿಶ್ವಾಸಿ,

(ಪ್ರತಾಪ್ ಲಿಂಗಯ್ಯ).,
ರಾಜ್ಯ ಎನ್.ಎಸ್.ಎಸ್.ಅಧಿಕಾರಿ
ರಾಷ್ಟ್ರೀಯ ಸೇವಾ ಯೋಜನಾ ಕೋಶ,
ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ.

ಪ್ರತಿ:1. ಅಪರ ಮುಖ್ಯ ಕಾರ್ಯದರ್ಶಿಗಳು, ಯುವಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಕರ್ನಾಟಕ ಸರ್ಕಾರ,
2. ಪ್ರಾದೇಶಿಕ ನಿರ್ದೇಶಕರು, ರಾಷ್ಟ್ರೀಯ ಸೇವಾ ಯೋಜನೆ, ಪ್ರಾದೇಶಿಕ ಕೇಂದ್ರ, ಭಾರತ ಸರ್ಕಾರ, ಬಸವನಗುಡಿ, ಬೆಂಗಳೂರು.

PCs Corre.. 2022-23